ಅ) ಬಸವಕಲ್ಯಾಣದ ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳಿಗೆ ಬೀದರ್‌ನಲ್ಲಿನ ಸಣ್ಣ ನೀರಾವರಿ ಉಪ ವಿಭಾಗವನ್ನು ಅವಲಂಬಿಸಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಬಸವಕಲ್ಯಾಣದಲ್ಲಿ ಸಣ್ಣ ನೀರಾವರಿ ಉಪವಿಭಾಗವನ್ನು ಪ್ರಾರಂಭಿಸಲು ಕ್ರಮಸ ಕೈಗೊಳ್ಳಲಾಗುವುದೇ?

ಡಾ॥ ಆರ್.ಬಿ. ಚೌಧರಿ (ಸಣ್ಣ ನೀರಾವರಿ ರಾಜ್ಯ ಸಚಿವರು):

ಅ) ಬಸವಕಲ್ಯಾಣದಲ್ಲಿ ಸಣ್ಣ ನೀರಾವರಿ ಉಪ-ವಿಭಾಗವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಬಂದಿದೆ.

ಇ) ಪರಿಶೀಲಿಸಲಾಗುವುದು.

ಬಸವ ಕಲ್ಯಾಣದ ರಾಜೇಶ್ವರದಲ್ಲಿ 33 ಕೆವಿಎ ಪವರ್ ಸ್ಟೇಷನ್ ಅನ್ನು ಮಂಜೂರು ಮಾಡುವುದು

332 - ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವ ಕಲ್ಯಾಣ): ಮಾನ್ಯ ಇಂಧನ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವ ಕಲ್ಯಾಣದ ರಾಜೇಶ್ವರದಲ್ಲಿ 33 ಕೆವಿ ಪವರ್ ಸ್ಟೇಷನ್ ಅನ್ನು ಪ್ರಾರಂಭಿಸಲು ಜಾಗಕ್ಕಾಗಿ ಸರ್ವೆ ಮಾಡಲಾಗಿದ್ದು ಇದುವರೆಗೂ ಕ್ರಮ ತೆಗೆದುಕೊಳ್ಳದಿರಲು ಕಾರಣವೇನು?

ಆ) ಅಲ್ಲಿ ವಿದ್ಯುತ್ ಸರಬರಾಜು ಸರಿಯಾದ ರೀತಿಯಲ್ಲಿ ಆಗುತ್ತಿಲ್ಲವಾದ್ದರಿಂದ ರೈತರ ಪಂಪ್ಸೆಟ್ಗಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದಲ್ಲಿ ಆ ಪವರ್ ಸ್ಟೇಷನ್ ಅನ್ನು ಪ್ರಾರಂಭಿಸಲು ಯಾವಾಗ ಕ್ರಮ ತೆಗೆದುಕೊಳ್ಳಲಾಗುವುದು.

ಶ್ರೀ ಕೆ.ಎ. ನಿಸಾರ್ ಅಹಮದ್ (ಇಂಧನ ರಾಜ್ಯ ಮಂತ್ರಿಗಳು):

ಅ) ಬಸವಕಲ್ಯಾಣದ ರಾಜೇಶ್ವರದಲ್ಲಿ ಉದ್ದೇಶಿತ 33 ಕೆವಿ ವಿದ್ಯುತ್ ಸಬ್-ಸ್ಟೇಷನ್ನ ಮಂಡಳಿಯು ಹುಮ್ನಾಬಾದ್ನಲ್ಲಿ ನಿರ್ಮಾಣ ಮಾಡುತ್ತಿರುವ 220-110 ಕೆವಿ ವಿದ್ಯುತ್ ಸ್ವೀಕರಣಾ ಕೇಂದ್ರದಿಂದ ವಿದ್ಯುತ್ ಸರಬರಾಜು ಮಾಡಬೇಕಾಗಿದೆ. ಆದ್ದರಿಂದ ಮೊದಲು ಹುಮ್ನಾಬಾದ್ನಲ್ಲಿ ನಿರ್ಮಾಣವಾಗುತ್ತಿರುವ 220-110ಕೆವಿ ವಿದ್ಯುತ್ ಸ್ವೀಕರಣಾ ಕೇಂದ್ರವನ್ನು ಚಾಲನೆಗೊಳಿಸುವುದು ಅತ್ಯವಶ್ಯಕವಾಗಿದೆ, ಸದರೀ ವಿದ್ಯುತ್ ಸ್ವೀಕರಣಾ ಕೇಂದ್ರದ ನಿರ್ಮಾಣ ಕಾರ್ಯವು ಭರದಿಂದ ಸಾಗುತ್ತಿದ್ದು ಫೆಬ್ರುವರಿ 1994ರ ಅಂತ್ಯದ ವೇಳೆಗೆ ಮೊದಲು 100 ಎಂವಿಎ ಸಾಮರ್ಥ್ಯದ ಪವರ್ ಟ್ರಾನ್ಸ್ಫಾರ್ಮರ್ ಚಾಲನೆಗೊಳ್ಳುವ ನಿರೀಕ್ಷೆ ಇದೆ.

ಆ) ರಾಜೇಶ್ವರ ಗ್ರಾಮ ಮತ್ತು ಅದರ ಸುತ್ತಮುತ್ತಲಿನ ಕೆಲವು ಪ್ರದೇಶಗಳಲ್ಲಿ ಕಡಿಮೆ ವೋಲ್ಟೇಜ್ ಪರಿಸ್ಥಿತಿ ಉಂಟಾಗಿರುವ ವಿಷಯ ಮಂಡಳಿಯ ಗಮನಕ್ಕೆ ಬಂದಿದೆ ಆದರೆ ಇದರಿಂದ ರೈತರ ಪಂಪ್ಸೆಟ್ಗಳು ಹಾಳಾಗುತ್ತಿರುವ ನಿರ್ದಿಷ್ಟ ಪ್ರಕರಣಗಳು ಮಂಡಳಿಯ ಗಮನಕ್ಕೆ ಬಂದಿಲ್ಲ.

ಇ) ರಾಜೇಶ್ವರ ಗ್ರಾಮದಲ್ಲಿ ಉದ್ದೇಶಿತ 33-111 ಕೆವಿ ವಿದ್ಯುತ್ ಸಬ್-ಸ್ಟೇಷನ್ನಿನ ನಿರ್ಮಾಣ ಕಾರ್ಯವನ್ನು 1994-95ರ ಸಾಲಿನಲ್ಲಿ ತೆಗೆದುಕೊಳ್ಳಲಾಗುವುದು.

ಬಸವ ಕಲ್ಯಾಣ ತಾಲ್ಲೂಕಿನ ಸಸ್ತಾಪುರ ಗ್ರಾಮದಲ್ಲಿ 110 ಕೆವಿಎ ಪವರ್ ಸ್ಟೇಷನ್ಅನ್ನು ಪ್ರಾರಂಭಿಸುವುದು.

334 - ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವ ಕಲ್ಯಾಣ): ಮಾನ್ಯ [illegible] ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?